ಸಾಕ್ಷಿಯನ್ನು ದಿಃ 10-10-2019 ರಂದು ಕರೆಸಿ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರಃ ಶ್ರೀ ಜಿ ಟಿ ಎನ್ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಗೆ ಸಂಬಂಧಿಸಿ ಪ್ರಮಾಣ ಪತ್ರವನ್ನು ಹಾಜರ ಪಡಿಸಿದ್ದು, ಅದರಲ್ಲಿ ನಮೂದಿಸಿರುವ ಮಜಕೂರುಗಳು ಸತ್ಯವಾಗಿದ್ದು, ಅದಕ್ಕೆ ನನ್ನ ಸಹಿ ಇದೆ.

ವಾದಿ ಮತ್ತು ಪ್ರತಿವಾದಿ ಕೊಟ್ಟ ಮಾಹಿತಿ ಮೇರೆಗೆ ನಾನು ದಿಃ 11-4-2012 ರಂದು ಕ್ರಯದ ಕರಾರು ಪತ್ರವನ್ನು ಬರೆದು ಸಹಿ ಮಾಡಿರುತ್ತೇನೆ. ಸದ್ರಿ ದಾಖಲಾತಿಯನ್ನು ಪುನಃ ನೋಡಿದರೆ ಗುರುತಿಸಬಲ್ಲೆ. ಸಾಕ್ಷಿಯು ದಿಃ 11-4-2012 ರ ಕ್ರಯದ ಕರಾರು ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-8 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-8 ಸಿ ಎಂದು ಗುರುತಿಸಲಾಯಿತು.

**ಪಾಟಿ ಸವಾಲುಃ ಶ್ರೀ ಜಿ ಎಫ್ ಎನ್ ವಕೀಲರಿಂದಃ**

ಮಾನ್ಯ ವಕೀಲರ ಕೋರಿಕೆಯ ಮೇರೆಗೆ ಪಾಟಿ ಸವಾಲನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಕಾರವಾರ.